(2.) ಈ ಬಾಬತು ಹರಾಜ್ ತಾಲ್ಲೂಕು ಕಚೇರಿಯಲ್ಲಿ ದಿವಿ 11 ಘಂಟೆಗೆ ಅಮಲ್ದಾರ್ರು ಅಥವಾ ಶಿರಸ್ತೇದಾರ್ರು ಮಾಡಿ ಸುತ್ತಾರೆ.

(3.) ಇಜಾರೆಯು ಪ್ರತಿಸಾಲ್ ಜುಲೈ ಲಾಗಾಯತು ಒಂದು ವರುಷದ ವರಿಗೆ ಇರತಕ್ಕದ್ದು.

(4.) ಹರಾಜ್ ಕಾಲದಲ್ಲಿ ಸವಾಲ್ ಮಾಡತಕ್ಕವರು ತಮ್ಮ್ಯ ಸ್ವಂತಕ್ಕೋಸ್ಕರ ಸವಾಲ್ ಮಾಡುತ್ತಾರೋ ಅಥವಾ ಇತರರಿಗೋಸ್ಕರ ಏಜಂಟರಾಗಿ ಸವಾಲ್ ಮಾಡುತ್ತಾರೋ ಆ ಸಂಗತಿಯನ್ನು ತಿಳಿಸಬೇಕು. ಏಜಂಟರು ಸವಾಲ್ ಮಾಡುವದಾದರೆ ತಾವು ಯಾರಿಗೋಸ್ಕರ ಸವಾಲ್ ಮಾಡುತ್ತಾರೋ ಆ ಸಂಗತಿಯನ್ನ ತಿಳಿಸಿ ಅವರಿಂದ ಪಡದುಕೊಂಡಿರುವ ಅಧಿಕಾರ ಪತ್ರಿಕೆಯನ್ನ ಹಾಜರ್ಪಡಿಬೇಕು. ಹಾಗೆ ಮಾಡಲು ತಪ್ಪಿದರೆ ಅವರ ಸವಾಲ್ ತಿರಸ್ಕರಿಸಲ್ಪಡುತ್ತೆ.

(5.) ಚಡಸವಾಲ್ದಾರನು ಹರಾಜ್ ಕಾಲದಲ್ಲಿ ತನ್ನ ಸವಾಲ್ ಅಂಗೀಕರಿಸಲ್ಪಟ್ಟ ಕೂಡ್ಲೆ ಸವಾಲ್ ಮೊಬಲಗು ಪೈಕಿ ಶೇಕಡಾ 25 ರೂಪಾಯಿ ಪ್ರಕಾರ ಡಿಪಾಜಿಟ್ ಹಾಜರ್ಪಡಿಬೇಕು. ಬಾಕಿ ಮೊಬಲಗನ್ನ ರೂಪಾಯಿ 1ಕ್ಕೆ 1 ಆಣೇ ಮೇರೆ ಲೋಕಲ್‌ಸೆಸ್ ಸಹಿತ ಹರಾಜ್ ಖಾಯಂ ಆದ ಸಂಗತಿ ಬರಹ ಮೂಲಕ ಅಮಲ್ದಾರ್ರವರಿಂದ ತಿಳಿಸಲ್ಪಟ್ಟ ತಾರೀಖು ಲಾಗಾಯತು 7 ದಿವಸದಲ್ಲಿ ಪಾವತಿ ಮಾಡಿಬೇಕು. ಡಿಪಾಜಿಟ್ ಕಟ್ಟುವದಕ್ಕೂ ಅಥವಾ ಬಾಕಿ ಮೊಬಲಗನ್ನು ಪಾವತಿ ಮಾಡುವದಕ್ಕೂ ತಪ್ಪಿದರೆ ಈ ಬಾಬು ಪುನಹ ಹರಾಜ್ ಮಾಡಲ್ಪಟ್ಟು ಅದರಿಂದ ಉಂಟಾಗುವ ನಷ್ಟಕ್ಕೆ ಮೊದಲ್ ಸವಾಲ್ದಾರನನ್ನ ಗುರಿಮಾಡಲ್ಪಡುತ್ತೆ.

(6.) ಇಜಾರೆದಾರನು ಹಿಡುವಳಿ ಜಮೀನಿನಲ್ಲಿ ಇರತಕ್ಕ ಕುರಂಗದ ಕಲ್ಲುಗಳನ್ನ ಆಯಾ ಹಿಡುವಳಿದಾರನ ಅನುಮತಿ ವಿನಹ ಆರಿಸಿಕೊಳ್ಳಕೂಡದು. ತಮ್ಮ್ಯ ಹಿಡುವಳಿ ಜಮೀನಿನಲ್ಲಿ ಇರತಕ್ಕ ಕಲ್ಲುಗಳು ಜಮಾಯಿಸಿಕೊಳ್ಳುವದಕ್ಕಾಗಲಿ ಅಥವಾ ಇಜಾರೆದಾರನಿಗೇ ವಿನಹ ಇತರರಿಗೆ ಮಾರುವದಕ್ಕೆ ಆಗಲಿ ಹಿಡುವಳಿದಾರರಿಗೆ ಅಧಿಕಾರವಿರುವದಿಲ್ಲ.

(7.) ಇಜಾರೆದಾರನು ಹುಲ್ಲುಬನ್ನಿಯ ಯಾ ಹುಲ್ಲುಗಾವಲ್ ಇಜಾರೆದಾರ್ರ ಹಕ್ಕಿಗೆ ಆಟಂಕ ಪಡಿಸಕೂಡದು.

(8) ಹಿಡುವಳಿಯಲ್ಲಿ ಇಲ್ಲದ ಜಮೀನುಗಳನ್ನ ಸರಕಾರದವರು ದರಖಾಸ್ತುಗಳು ಬಂದಾಗ ಸಾಗುವಳಿಗೆ ಕೊಡತಕ್ಕ ವಿಷಯದಲ್ಲಿ ಇಜಾರೆದಾರನ ಅಭ್ಯಂತರವೇನೂ ಇರುವದಿಲ್ಲ. ಮತ್ತು ಅಂಥಾ ಜಮೀನುಗಳಲ್ಲಿ ಶಿಕ್ಕುವ ಕುರಂಗದ ಕಲ್ಲುಗಳನ್ನ ತೆಗದುಕೊಳ್ಳಲು ಅವರಿಗೆ ಹಕ್ಕು ಇರುತ್ತೆ.

(9.) ಕಲ್ಲುಗಳನ್ನ ಜಮಾಯಿಸುವದಕ್ಕಾಗಿ ಜಮೀನುಗಳನ್ನು ಇಜಾರೆದಾರನು ಅಗಿಯುಕೂಡದು. ಬಂದು ಬೇಳೆ ಆಗದರೆ, ಸಾಗುವಳಿಗೆ ಅನುಕೂಲಿಸುವ ಹಾಗೆ ಗುಣಿಗಳನ್ನ ಮುಚ್ಚಿ ಸರಪಡಿಸಬೇಕು.

(10.) ಕಲ್ಲುಗಳು ಜಮಾಯಿಸಲ್ಪಟ್ಟ ಗ್ರಾಮ, ಇಪ್ಪ ಮಣ ಕಲ್ಲು, ಮತ್ತು ಅದು ರಫ್ತಾಗುವ ಸ್ಥಳ ಈ ತಪ್ಶೀಲ್ ಕಂಡು ತಾಲ್ಲೂಕು ಅಮಲ್ದಾರ್ರಿಂದ ವಂದು ಮಾಫೀ ಲೈಸೆನ್ಸನ್ನು ಪಡೆಯದೆ ಕಲ್ಲುಗಳನ್ನು ಇಜಾರೆದಾರ್ರು ಸಾಗಿಸಕೂಡದು.

ವಿ. ಎಸ್. ನರಸುಂಹಯ್ಯಂಗಾರ್,
ಡೆಪ್ಯೂಟಿ ಕಮ್ಮಿಷನರ್.

ಕೋಲಾರ ಡಿಸ್ಟ್ರಿಕ್ಟ್.

ಇ ಸ್ತಿ ಹಾ ರ್ ನಾ ಮೆ.

ಬವರಿಂಗ್‌ಪೇಟೆ ತಾಲ್ಲೂಕು ಕಚೇರಿಯಿಂದ.

ತಾರೀಖು 10ನೇ ಜೂ ೧೮೯೬.

ಇದರಿಂದ ಸಮಸ್ತ ಜನರಿಗೂ ತಿಳಿಯಪಡಿಸುವದೇನಂದರೆ,—ಇದರಡಿ ಕಂಡ ಬವರಿಂಗ್‌ಪೇಟೆ ತಾಲ್ಲೂಕಿನ ಗ್ರಾಮಗಳ ಬೇಯುಣ ಬಂಜರು ಜಮೀನಿನ ಬಂಡೆಗಳಲ್ಲಿ ಕೊಯಿದು ಸಾಗಿಸುವ ಬಗ್ಗೆ ಸ್ ೧೮೯೬ನೇ ಇಸವಿ ಜುಲೈ 2ನೇ ತಾರೀಖು ದಿವಿ 11 ಘಂಟೆಗೆ ಹರಾಜ್ ಮಾಡಲ್ಪಡುತ್ತೆ.

2. ಈ ಹರಾಜ್ ತಾಲ್ಲೂಕು ಕಚೇರಿಯಲ್ಲಿ ಅಮಲ್ದಾರ್ ಯಾ ಶಿರಸ್ತೇದಾರ್ರ ಸಮಕ್ಷಮ ಜರಗಲ್ಪಡುವದು.

3. ಇದು ಡೆಪ್ಯೂಟಿ ಕಮ್ಮಿಷನರ್ ಸಾಹೆಬರವರ ಮಂಜೂರಿಗೆ ವಳಪಟ್ಟು ಇರತಕ್ಕದ್ದು.

4. ಸ್ ೧೮೯೭ನೇ ಇಸವಿ ಜೂ ಮಾಹೆ ವರಿಗೆ ಅವಧಿ ಕೊಟ್ಟು ಇದೆ.

5. ಹರಾಜಿನಲ್ಲಿ ಪಡೆಯುವನು ಹರಾಜ್ ಕಾಲದಲ್ಲಿ ಕೇಕಡಾ 25 ರೂಪಾಯಿನ ಮೇರಿಗೆ ಡಿಪಾಜಿಟ್ ಇಟ್ಟು ನಿಂತ ಹಣ ಸರಯಾದ ಕಾಲದಲ್ಲಿ ಅಂದರೆ ಹರಾಜ್ ಕಾಯಂ ಆದ ಸಂಗತಿ ತಿಳಿದ 7 ದಿವಸದ ವಳಗಾಗಿ ಲೋಕಲ್‌ಸೆಸ್ ವಗ್ಯೆರೆ ವಿಶಿಷ್ಟವೂ ಕೊಡದೆ ತಪ್ಪಿದರೆ ಡಿಪಾಜಿಟ್ ಹಣ ಸರ್ಕಾರಕ್ಕೆ ಶೇರಿಸಿಕೊಂಡು 2ನೇ ಹರಾಜ್ ಮಾಡಲ್ಪಡುತ್ತೆ.

6. ಕರಾರು.

ಎ. ಹರಾಜ್‌ದಾರ್ ಹುಲ್ಲುಬನ್ನಿ ದನಗಳು ಮೇಯಿಸುವ ಸ್ಥಳದಲ್ಲಿ ಹೋಗಕೂಡದು.
ಬಿ. ಸರ್ಕಾರ್ರ ಬಂಜರ್ ಜಮೀನಿನ ಬಂಡೆಗಳನ್ನ ತೆಗದುಕೊಳ್ಳ ಬಹುದು.
ಸಿ. ರೈತರು ತಮ್ಮ್ಯ ಸ್ವಂತ ಜಿರಾಯಿತು ವಗ್ಯೆರೆ ಕಟ್ಟಣಗಳಿಗೆ ಉಪಯೋಗಿಸುವ ಬಂಡೆಗಳಲ್ಲಿ ಪ್ರವೇಶಿಸಕೂಡದು.
ಡಿ. ಸರ್ಕಾರ್ ಕೆಲಸಗಳಿಗೋಸ್ಕರ ಬಂಡೆಗಳನ್ನ ಮುಫತ್ತಾಗಿ ಕೊಡಬೇಕು.
ಇ. ಹರಾಜ್‌ದಾರನು ಬಂಡೆ ತೆಗೆಯುವದರ ಮೂಲಕ ಜಮೀನ್ ಸಾಗುವಳಿಗೆ ಉಪಯೋಗವಿಲ್ಲದಂತೆ ಮಾಡಕೂಡದು.

16. ಬೆರ್ಮಂಗಲದ ಹೋಬಳಿ.

1 ನಾಗಿಶಟ್ಟಹಳ್ಳಿ	12 ಕದರೆಗವುಡನಕೋಟೆ	9 ದೊಡ್ಡಕಾರು ಮಜರೆ ಕುರುಬಕಾರು
6 ಪಾರಾಂಡಹಳ್ಳಿ	3 ಪೀಲಬಂಡೆ	14 ಗರುಡಾದ್ರಿಹಳ್ಳಿ
11 ನೆರ್ನಹಳ್ಳಿ	8 ತಮ್ಮೇನಹಳ್ಳಿ	5 ಜವನಕೊಪ್ಪ
2 ಅಲ್ಲಿಕುಂಟೆ ಕದರೆಪಲ್ಲಿ	13 ಗೊರ್ಲಚಿನ್ನೇಪಲ್ಲಿ	10 ಅಂಕತಟ್ಟಹಳ್ಳಿ
7 ಈಸಬೆ ಬೆರ್ಮಂಗಲ	4 ಕಮ್ಮಸಂದ್ರ	15 ಪೋಲೆಪಲ್ಲಿ
		16 ಪಗರಾಪುರ

6 ಕ್ಯಾಸಂಬಳ್ಳಿ ಹೋಬಳಿ.

1 ಬಾಣಗೆರೆ	3 ಕೆಂಪಾಪುರ	5 ಬಳಗೆರೆ
2 ಪೂಜಾರಿಹಳ್ಳಿ	4 ಅಲ್ಲೀಕಲ್ಲು	6 ಜಂಬರಸನಹಳ್ಳಿ

6 ದಾಸರಹೊಸಹಳ್ಳಿ ಹೋಬಳಿ.

1 ಮಲಿಯಾಂಗುರಿಕಿ	3 ಬಲ್ಲಿಗಾನಹಳ್ಳಿ	5 ವೆದ್ದಪಲ್ಲಿ
2 ತೊಂಗಲ್ಲು	4 ಮಾದಮಂಗಲ	6 ಮಾವಹಳ್ಳಿ

1 ಈಸಬೆ ಹೋಬಳಿ ನಾಯಕರಹಳ್ಳಿಬಂಡೆ

ಬಿ. ಜಿ. ಕೃಷ್ಣಯ್ಯಂಗಾರ್,
ಅ|| ಡೆಪ್ಯುಟಿ ಕಮ್ಮಿಷನರ್.

ತುಮಕೂರ್ ಡಿಸ್ಟ್ರಿಕ್ಟ್.

ಸ್ಥಿರಸ್ವತ್ತಿನ ಹರಾಜು ಬಗ್ಗೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧಪತ್ರಿಕೆ.

1. ಕಂದಾಯದ ಬಾಕಿದಾರರಾದ ಈ ಕೆಳಗೆ ನಮೂದಾಗುವ ಜೋಡೀದಾರರಿಂದ ಬರಬೇಕಾದ ಜಮ್ಮಾ ಕಂದಾಯದ ಬಾಕಿಗಾಗಿ ಇದರಡಿ ನಮೂದಾಗು ಹಿಡುವಳಿ ಹಕ್ಕು ತಪ್ಪಿಸಲ್ಪಟ್ಟ ಸ್ಥಿರಸ್ವತ್ತು ತುಮಕೂರ್ ಡಿಸ್ಟ್ರಿಕ್ಟ್ ತಿಪಟೂರು ತಾಲ್ಲೂಕು ಕಚೇರಿಯಲ್ಲಿ 1896ನೇ ಇಸವಿ ಆಗಸ್ಟ್ 8ನೇ ತಾರೀಖಿನಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧ ಪಡಿಸಲ್ಪಟ್ಟಿದೆ.

ಹರಾಜು ಡಿಟೋ ತಾರೀಖು ದಿವಿ 11 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕದಂ ಜಡದರಖಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 1895—96ನೇ ಸಾಲಿಗೆ * ಬಾಕಿ ಕಂದಾಯದ ಬಗ್ಗೆ ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಡಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ತಹ್ಸೀಲ್ ವೇರಿಗೆ 725-11-10 ರೂಪಾಯಿ ಆಗಿರುತ್ತೆ.

3. ಹರಾಜು ಕಾಲದಲ್ಲಿ ಹರಾಜ್‌ದಾರನು ಹರಾಜ್ ಮೊಬಲಗಿನ ಶೇಕಡಾ 25 ರೂಪಾಯಿಯನ್ನು ಡಿಪಾಜಿಟ್ ಹಾಜರ್ಮಾಡಬೇಕಾಗಿರುತ್ತೆ. ಅದು ಜಾತಾ ಹರಾಜ್ ಬಾಬತು ಬಾಕಿ ಮೊಬಲಗು ಹರಾಜು ತಾರೀಖು ಲಾಗಾಯತು 15 ದಿವಸಗಳಲ್ಲಿ ಪಾವತಿ ಮಾಡಲ್ಪಡದೆ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ ಮೊಬಲಗನ್ನು ಹಾಜರ್ಮಾಡಿದವನು ಕಳದುಕೊಳ್ಳಲು ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕಿ ಮೊಬಲಗು ಪಾವತಿ ಮಾಡಲ್ಪಡದೇ ಹೋದಾಗ್ಯೆ ಸದರೀ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ ಆದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಪಡಿಸಿಯೂ ಪುನಃ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸವಾಲ್ ಮಾಡತಕ್ಕ ಜನಗಳು ಖುದ್ದು ತಮ್ಮ ಸ್ವಂತಕ್ಕೋಸ್ಕರ ಸವಾಲ್ ಮಾಡುತ್ತಾರೆಯೇ ಯಾ ಏಜಂಟ್ ಯಾ ಮುತಾಲೀಕರಾಗಿ ಸವಾಲ್ ಮಾಡುತ್ತಾರೆಯೇ ಎಂಬ ಅಂಶವನ್ನ ತಿಳಿಸಬೇಕೆಂತಲೂ, ಇತರರಿಗೋಸ್ಕರ ಮುತಾಲೀಕರಾಗಿ ಸವಾಲ್ ಮಾಡುವ ಸಂದರ್ಭದಲ್ಲಿ ಅಂಥಾ ತಮ್ಮ ಯಜಮಾನರಿಂದ ಸಹಿ ಮಾಡಲ್ಪಟ್ಟು ಲಿಖಿತವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡುವಂತೆಯೂ ಕೇಳಲ್ಪಡಬಹುದು. ಅದನ್ನ ಅವರು ಹಾಜರ್ಮಾಡದೆ ಹೋದಲ್ಲಿ ಅವರ ಸವಾಲುಗಳು ತಿರಸ್ಕರಿಸಲ್ಪಡಬಹುದು.

6. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ, ಬಾಕಿದಾರನಾಗಲಿ ಆತನ ತರಫಿನವನಾಗಿ ಪ್ರವರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲಿ ಬಾಕಿಯಲ್ಲಿ ಬಂದಿರುವ ಪೂರಾ ಕಂದಾಯದ ಹಣವನ್ನೂ ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

7. ಹರಾಜು ಡೆಪ್ಯುಟಿ ಕಮ್ಮಿಷನರವರಿಂದ ಮಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

8. ಹರಾಜಿನಲ್ಲಿ ತೆಗದುಕೊಂಡವರು ಹರಾಜ್ ಮೊಬಲಗನ್ನು ಪೂರ್ತಿಯಾಗಿ ಪಾವತಿಮಾಡಿದ ಮೇಲೆ ಡೆಪ್ಯುಟಿ ಕಮ್ಮಿಷನರವರಿಂದ ಹರಾಜ್ ಮಂಜೂರ್ಮಾಡಲ್ಪಟ್ಟು ಕೊಡ್ಲೆ, ಹರಾಜುದಾರು ಸದರೀ ಸ್ವತ್ತಿನ ಸ್ವಾಧೀನವನ್ನ ಹೊಂದುವರು. ಮತ್ತು ಸದರೀ ಸ್ವತ್ತು ಹರಾಜ್‌ದಾರನ ಹೆಸರಿನಲ್ಲಿ ರೆಜಿಸ್ಟರ್ ಮಾಡಲ್ಪಟ್ಟು ಡೆಪ್ಯುಟಿ ಕಮ್ಮಿಷನರವರಿಂದ ಸೈ ಮೊಹರ್ ಮಾಡಲ್ಪಟ್ಟ ಬಂದು ಹರಾಜ್ ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯೂ ಯಾ ವಿಸ್ತೀರ್ಣದಲ್ಲಿಯೂ ಇರುವ ಸ್ಖಲಿತ್ಯಗಳಿಗೆ ಗವರ್ಮೆಂಟಿನವರು ಜವಾಬ್ದಾರ್ರಲ್ಲವೆಂಬ ಅಂಶವನ್ನ ಸ್ಪಷ್ಟವಾಗಿ ತಿಳಿದಿರತಕ್ಕದ್ದು.

9. ಹರಾಜಿನಿಂದ ತಮಗೆ ನಷ್ಟ ಉಂಟಾಯಿತೆಂದು ಎಣಿಸುವ ಜನಗಳು ಹರಾಜ್ ತಾರೀಖು ಲಾಗಾಯತು 30 ದಿವಸಗಳಲ್ಲಿ ಡೆಪ್ಯುಟಿ ಕಮ್ಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಮತ್ತು ಅವರ ಹುಕುಮಿನ ಮೇಲೆ ಕಾನೂನಿನಿಂದ ವಿಧಿಸಲ್ಪಟ್ಟ ವಾಯಿದೆಯಲ್ಲಿ ಗವರ್ಮೆಂಟಿನವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯವು ಅಂಥಾ ಅಪ್ಪೀಲಿನಲ್ಲಿ ಆಗುವ ಫೈಸಲ್ ಹುಕುಮಿಗೆ ಬದ್ಧವಾಗಿರತಕ್ಕದ್ದು.